**Akashvani : Bangalore**
**National Bulletin In Kannada**
**24.03.2024 / 7.35 am**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**24.03.2024 / 7.35 am**

**<><*<><>*><>**

**<u>ಮುಖ್ಯಾಂಶಗಳು</u>**

೧. ಭೂತಾನ್ ಮುಖಂಡರೊಂದಿಗೆ ನಡೆಸಿದ ಮಾತುಕತೆಯಿಂದ ಭಾರತ-ಭೂತಾನ್ ಮೈತ್ರಿ ಬಲಗೊಂಡಂತಾಗಿದೆ- ಪ್ರಧಾನಮಂತ್ರಿ ನರೇಂದ್ರ ಮೋದಿ

೨. ಇಂದು ವಿಶ್ವ ಕ್ಷಯರೋಗ ಜಾಗೃತಿ ದಿನ; ಕ್ಷಯರೋಗ ಮುಕ್ತ ಭಾರತ ನಿರ್ಮಿಸಲು ಒಗ್ಗಟ್ಟಿನಿಂದ ಕೆಲಸ ಮಾಡಬೇಕು -ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ

೩. ರಷ್ಯಾದಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟವರ ಸಂಖ್ಯೆ ೧೩೩ಕ್ಕೆ ಏರಿಕೆ

೪. ಐಪಿಲ್ ಟಿ-೨೦ ಕ್ರಿಕೆಟ್; ನಿನ್ನೆ ನಡೆದ ಪಂದ್ಯದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ತಂಡಕ್ಕೆ ಸನ್ ರೈಸರ್ಸ್ ಹೈದರಾಬಾದ್ ವಿರುದ್ಧ ೪ ರನ್ ಜಯ

**<><*<><>*><>**

ಭೂತಾನ್ ಭೇಟಿ ಸಂದರ್ಭದಲ್ಲಿ ಅಲ್ಲಿನ ಧುರೀಣರೊಂದಿಗೆ ನಡೆಸಲಾದ ಮಾತುಕತೆಯಿಂದ ಭಾರತ- ಭೂತಾನ್ ಮೈತ್ರಿ ಬಲಗೊಂಡಂತಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಭೂತಾನ್‌ನ ಎರಡು ದಿನಗಳ ಭೇಟಿಯ ನಂತರ ನಿನ್ನೆ ದೆಹಲಿಗೆ ಹಿಂದಿರುಗಿದ ಪ್ರಧಾನಮಂತ್ರಿ ನರೇಂದ್ರ ಮೋದಿ, ತಮ್ಮ ಭೂತಾನ್ ಭೇಟಿ ತುಂಬಾ ವಿಶೇಷವಾಗಿತ್ತು. ಭೂತಾನ್ ದೊರೆ ಮತ್ತು ಪ್ರಧಾನಮಂತ್ರಿ ಅವರೊಂದಿಗೆ ಭೇಟಿ ಕೂಡ ಹಾರ್ದಿಕವಾಗಿತ್ತು. ಈ ಧುರೀಣರೊಂದಿಗೆ ನಡೆಸಲಾದ ಮಾತುಕತೆಯಿಂದ ಉಭಯ ದೇಶಗಳ ಮೈತ್ರಿ ಬಲಗೊಳ್ಳಲಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಭೂತಾನ್ ಜನರ ಆತ್ಮೀಯತೆ ಮತ್ತು ಆತಿಥ್ಯಗಳಿಗೆ ಧನ್ಯವಾದ ತಿಳಿಸಿರುವ ಪ್ರಧಾನಮಂತ್ರಿ, ಭಾರತ ಮತ್ತು ಭೂತಾನ್ ದೇಶಗಳು ವಿಶ್ವಾಸಾರ್ಹ ಪಾಲುದಾರ ಹಾಗೂ ಸ್ನೇಹಪರ ದೇಶವಾಗಿ ಇರಲಿದೆ ಎಂದು ಹೇಳಿದ್ದಾರೆ. ಭೂತಾನ್ ದೊರೆ, ವಿಶೇಷ ಗೌರವದ ದ್ಯೋತಕವಾಗಿ ವಿಮಾನ ನಿಲ್ದಾಣಕ್ಕೂ ಬಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು

ಬೀಳ್ಕೊಟ್ಟರು. ಇದಕ್ಕೂ ಮುನ್ನ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಭಾರತ ಸರ್ಕಾರದ ನೆರವಿನಿಂದ ಥಿಂಪುವಿನಲ್ಲಿ ನಿರ್ಮಿಸಲಾದ ಗ್ಯಾಲ್ಸನ್ ಜೆಟ್ಸನ್ ತಾಯಿ-ಮಗು ಆಸ್ಪತ್ರೆಯನ್ನು ಉದ್ಘಾಟಿಸಿದರು. ಒಂದನೇ ಹಂತದಲ್ಲಿ ೧೫೦ ಹಾಸಿಗೆ ಸಾಮರ್ಥ್ಯದ ಈ ಆಸ್ಪತ್ರೆಯನ್ನು ೨೨ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿದ್ದು, ಇದು ೨೦೧೯ ರಿಂದ ಕಾರ್ಯ ನಿರ್ವಹಿಸುತ್ತಿದೆ. ಪ್ರಸ್ತುತ ಸೌಲಭ್ಯವನ್ನು ಎರಡನೇ ಹಂತದಲ್ಲಿ ೧೧೯ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿದ್ದು, ತಾಯಿ ಮತ್ತು ಮಗು ಆರೋಗ್ಯಕ್ಕಾಗಿ ಉತ್ತಮ ಸೇವಾ ಸೌಲಭ್ಯ ಹೊಂದಿದೆ.

<><*<><>*><>

ಲೋಕಸಭೆ ಚುನಾವಣೆಗೆ ಅಭ್ಯರ್ಥಿಗಳಿಗೆ ಸಮ್ಮತಿ ಸೂಚಿಸಲು ಬಿಜೆಪಿಯ ಕೇಂದ್ರ ಚುನಾವಣಾ ಸಮಿತಿ ಸಭೆ ನವದೆಹಲಿಯ ಪಕ್ಷದ ಪ್ರಧಾನ ಕಚೇರಿಯಲ್ಲಿ ನಿನ್ನೆ ನಡೆಯಿತು. ಪ್ರಧಾನಿ ನರೇಂದ್ರ ಮೋದಿ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ, ಗೃಹ ಸಚಿವ ಅಮಿತ್ ಶಾ ಸೇರಿದಂತೆ ಸಮಿತಿಯ ಸದಸ್ಯರು ಮತ್ತು ರಾಜ್ಯಗಳ ಪದಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

<><*<><>*><>

ಮುಂದಿನ ಲೋಕಸಭೆ ಚುನಾವಣೆಗೆ ಕಾಂಗ್ರೆಸ್ ಪಕ್ಷ, ೪೫ ಅಭ್ಯರ್ಥಿಗಳ ಮತ್ತೊಂದು ಪಟ್ಟಿಯನ್ನು ನಿನ್ನೆ ಬಿಡುಗಡೆ ಮಾಡಿದೆ. ವಾರಾಣಸಿ ಲೋಕಸಭಾ ಕ್ಷೇತ್ರದಿಂದ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಉತ್ತರಪ್ರದೇಶದ ಕಾಂಗ್ರೆಸ್ ಘಟಕದ ಮುಖ್ಯಸ್ಥ ಅಜಯ್ ರೈ ಅವರನ್ನು ಕಾಂಗ್ರೆಸ್ ಪಕ್ಷ ಕಣಕ್ಕಿಳಿಸಿದೆ. ಹಿರಿಯ ಕಾಂಗ್ರೆಸ್ ನಾಯಕ ದಿಗ್ವಿಜಯ ಸಿಂಗ್ ಮಧ್ಯಪ್ರದೇಶದ ರಾಜ್‌ಗಢ ಲೋಕಸಭೆ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ. ಉತ್ತರ ಪ್ರದೇಶದ ಅಮ್ರೋಹಾ ಕ್ಷೇತ್ರದಿಂದ ಸಂಸದ ಡ್ಯಾನಿಶ್ ಅಲಿ ಕಾಂಗ್ರೆಸ್ ಅಭ್ಯರ್ಥಿಯಾಗಿದ್ದರೆ, ಕಾರ್ತಿ ಚಿದಂಬರಂ ಶಿವಗಂಗಾ ಕ್ಷೇತ್ರದಿಂದ ಮತ್ತು ಮಾಣಿಕಂ ಟ್ಯಾಗೋರ್ ತಮಿಳುನಾಡಿನ ವಿರುಧ್ ನಗರ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ. ಕಾಂಗ್ರೆಸ್ ರಾಜಸ್ಥಾನದ ನಾಗೌರ್ ಲೋಕಸಭಾ ಕ್ಷೇತ್ರವನ್ನು ಹನುಮಾನ್ ಬೇನಿವಾಲ್ ಅವರ ರಾಷ್ಟ್ರೀಯ ಲೋಕತಾಂತ್ರಿಕ ಪಕ್ಷಕ್ಕೆ ಬಿಟ್ಟುಕೊಟ್ಟಿದೆ. ಮುಂಬರುವ ಸಿಕ್ಕಿಂ ವಿಧಾನಸಭೆಗೆ ೧೮ ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಕಾಂಗ್ರೆಸ್ ಬಿಡುಗಡೆ ಮಾಡಿದೆ.

<><*<><>*><>

೨೦೨೪ರ ಲೋಕಸಭಾ ಚುನಾವಣೆಯಲ್ಲಿ ಅಂದಾಜು ಒಂದು ಕೋಟಿ ೮೦ ಲಕ್ಷ ನವ ಮತದಾರರು ತಮ್ಮ ಅಮೂಲ್ಯ ಹಕ್ಕನ್ನು ಮೊದಲ ಬಾರಿಗೆ ಚಲಾಯಿಸಲಿದ್ದಾರೆ. ಇವರೆಲ್ಲ ೧೮-೧೯ರ

ಪ್ರಾಯದವರು. ಮೊದಲ ಬಾರಿಗೆ ಮತ ಚಲಾಯಿಸುವ ಯುವಕರಿಗೆ ಅವರ ಈ ಪವಿತ್ರ ಕರ್ತವ್ಯದ ಮಹತ್ವವನ್ನು ಮನಗಾಣಿಸುವ ಸಲುವಾಗಿ ಸಾಮಾಜಿಕ ಜಾಲತಾಣಗಳಲ್ಲಿ 'ನಾನು ಖಂಡಿತ ಮತ ಚಲಾಯಿಸುತ್ತೇನೆ' ಎನ್ನುವ ಪ್ರಚಾರ ಆಂದೋಲನಗಳು ನಡೆಯುತ್ತಿವೆ. ಈ ಬಾರಿ ಚುನಾವಣೆಯಲ್ಲಿ ಭಾಗವಹಿಸುವ ಯುವ ಮತದಾರರ ಪೈಕಿ ೨೦ ರಿಂದ ೨೯ ವರ್ಷ ವಯೋಮಾನದ ಅಂದಾಜು ೧೯ ಕೋಟಿ ೭೪ ಲಕ್ಷ ಮತದಾರರು ಪಾಲ್ಗೊಳ್ಳಲಿದ್ದಾರೆ. ೧೮ ವರ್ಷಕ್ಕೆ ಮತದಾನದ ಹಕ್ಕು ದೊರೆಯುವುದಾದರೂ ಈಗ ೧೭ ವರ್ಷ ತುಂಬಿರುವ ಯುವಜನ ಸಮೂಹದಿಂದ ೧೩.೪ ಲಕ್ಷಕ್ಕೂ ಅಧಿಕ ಅರ್ಜಿಗಳನ್ನು ಮುಂಚಿತವಾಗಿಯೇ ಸ್ವೀಕರಿಸಲಾಗಿದೆ. ಕೇಂದ್ರ ಚುನಾವಣಾ ಆಯೋಗ ಯುವ ಜನರಿಗೆ ಮತದಾನಕ್ಕೆ ಪ್ರೋತ್ಸಾಹ ನೀಡುವ ಸಲುವಾಗಿ ಸಚಿನ್ ತೆಂಡೂಲ್ಕರ್ ಮತ್ತು ರಾಜಕುಮಾರ್ ರಾವ್ ಅವರಂತಹ ರಾಷ್ಟ್ರೀಯ ದಿಗ್ಗಜರಿಂದ ಸಂದೇಶಗಳನ್ನು ಪ್ರಸಾರ ಮಾಡುತ್ತಿದೆ.

<><*<><>*><>

ಇಂದು ವಿಶ್ವ ಕ್ಷಯರೋಗ ಜಾಗೃತಿ ದಿನ; ಈ ವರ್ಷದ ಘೋಷವಾಕ್ಯ ಎಸ್ ವಿ ಕ್ಯಾನ್ ಎಂಡ್ ಟಿಬಿ- ಹೌದು ನಾವು ಕ್ಷಯರೋಗವನ್ನು ಸಂಪೂರ್ಣ ನಿವಾರಿಸಬಹುದು ಎಂಬುದಾಗಿದೆ. ವಿಶ್ವ ಕ್ಷಯರೋಗ ದಿನದ ಮುನ್ನಾದಿನವಾದ ನಿನ್ನೆ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಭಾರತವನ್ನು ಕ್ಷಯರೋಗ ಮುಕ್ತವನ್ನಾಗಿಸಲು ಒಗ್ಗಟ್ಟಿನಿಂದ ಕೆಲಸ ಮಾಡಬೇಕೆಂದು ಕರೆ ನೀಡಿದರು. ರಾಷ್ಟ್ರಕ್ಕೆ ನೀಡಿದ ಸಂದೇಶದಲ್ಲಿ ರಾಷ್ಟ್ರಪದಿ ದ್ರೌಪದಿ ಮುರ್ಮು, ಕ್ಷಯ ರೋಗದ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಪ್ರತಿ ವರ್ಷ ಮಾರ್ಚ್ ೨೪ ರಂದು ವಿಶ್ವ ಕ್ಷಯರೋಗ ದಿನವನ್ನು ಆಚರಿಸುತ್ತಿರುವುದಕ್ಕೆ ಸಂತಸ ವ್ಯಕ್ತಪಡಿಸಿದರು. ಈ ದಿನವು ರೋಗವನ್ನು ನಿಯಂತ್ರಿಸುವಲ್ಲಿನ ಸವಾಲುಗಳ ಬಗ್ಗೆ ಜಾಗೃತಿ ಮೂಡಿಸುತ್ತದೆ ಮತ್ತು ಅದನ್ನು ತಡೆಗಟ್ಟುವ ಪ್ರಯತ್ನಗಳನ್ನು ಬೆಂಬಲಿಸುತ್ತದೆ ಎಂದು ಅವರು ತಿಳಿಸಿದರು. ಈ ದಿನವು ಕ್ಷಯ ರೋಗದ ಆರಂಭಿಕ ಪತ್ತೆ, ಚಿಕಿತ್ಸೆ ಮತ್ತು ತಡೆಗಟ್ಟುವಿಕೆಯ ಪ್ರಾಮುಖ್ಯತೆಯನ್ನು ಪ್ರತಿಯೊಬ್ಬರಿಗೂ ನೆನಪಿಸುತ್ತದೆ ಎಂದು ಅವರು ಹೇಳಿದರು.

<><*<><>*><>

ಆರೋಗ್ಯ ಸಚಿವಾಲಯವು ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಪತ್ರ ಬರೆದಿದ್ದು, ಬೇಸಿಗೆಯ ತಿಂಗಳುಗಳಲ್ಲಿ ಆಸ್ಪತ್ರೆಗಳಲ್ಲಿ ಸಂಭವಿಸಬಹುದಾದ ಬೆಂಕಿ ಅವಘಢವನ್ನು ತಡೆಗಟ್ಟಲು ತುರ್ತು ಕ್ರಮಗಳನ್ನು ತೆಗೆದುಕೊಳ್ಳುವಂತೆ ಕೇಳಿದೆ. ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ

ಪ್ರದೇಶಗಳ ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ ಬರೆದಿರುವ ಆರೋಗ್ಯ ಕಾರ್ಯದರ್ಶಿ ಅಪೂರ್ವ ಚಂದ್ರ, ಬೇಸಿಗೆಯ ತಿಂಗಳುಗಳಲ್ಲಿ ತಾಪಮಾನ ಹೆಚ್ಚಾಗುವುದರಿಂದ ಆಸ್ಪತ್ರೆಯಲ್ಲಿ ಸಂಭವಿಸಬಹುದಾದ ಅಗ್ನಿ ಅವಗಢವು ಹೆಚ್ಚು ಅಪಾಯವನ್ನುಂಟುಮಾಡುತ್ತದೆ ಎಂದು ಹೇಳಿದ್ದಾರೆ. ರಾಜ್ಯ ಆರೋಗ್ಯ ಇಲಾಖೆಗಳು ಮತ್ತು ರಾಜ್ಯ ವಿಪತ್ತು ನಿರ್ವಹಣಾ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿರುವ ಎಲ್ಲಾ ಮಾನ್ಯತೆ ಪಡೆದ ಆಸ್ಪತ್ರೆಗಳಲ್ಲಿ ಅಗ್ನಿ ಅವಗಢಗಳನ್ನು ತಡೆಗಟ್ಟಲು ತಕ್ಷಣದ ಕ್ರಮ ಕೈಗೊಳ್ಳುವುದನ್ನು ಖಚಿತಪಡಿಸಿಕೊಳ್ಳಲು ನಿಕಟ ಸಹಯೋಗದೊಂದಿಗೆ ಕೆಲಸ ಮಾಡುವಂತೆ ನಿರ್ದೇಶಿಸ ಬೇಕೆಂದು ಆರೋಗ್ಯ ಸಚಿವಾಲಯವು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ತಿಳಿಸಿದೆ. ಆಸ್ಪತ್ರೆಗಳು ನಿಯಮಿತವಾಗಿ ಅಗ್ನಿಶಾಮಕ ಸಾಧನಗಳನ್ನು, ಹೈಡ್ರಂಟ್‌ಗಳು ಮತ್ತು ಅಲಾರಂಗಳನ್ನು ಪರೀಕ್ಷಿಸಬೇಕು ಎಂದು ಅದು ಹೇಳಿದೆ. ಅಗ್ನಿ ನಂದಿಸುವ ಉಪಕರಣಗಳ ಗಡುವಿನ ಮುಕ್ತಾಯ ದಿನಾಂಕಗಳನ್ನು ಪರಿಶೀಲಿಸಬೇಕು, ಫೈರ್ ಅಲಾರಮ್‌ಗಳು ಸರಿಯಾಗಿ ಕಾರ್ಯ ನಿರ್ವಹಿಸುವುದನ್ನು ಖಚಿತ ಪಡಿಸಿಕೊಳ್ಳಬೇಕೆಂದು ಸೂಚಿಸಿದೆ.

<><*<><>*><>

ರಷ್ಯಾದಲ್ಲಿ, ಕ್ರೋಕಸ್ ಸಿಟಿ ಹಾಲ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟವರ ಸಂಖ್ಯೆ ೧೩೩ ಕ್ಕೆ ಏರಿಕೆಯಾಗಿದೆ. ಶೋಧ ಕಾರ್ಯಾಚರಣೆ ಪ್ರಗತಿಯಲ್ಲಿದೆ ಮತ್ತು ಕನ್ಸರ್ಟ್ ಹಾಲ್‌ನಿಂದ ಅವಶೇಷಗಳನ್ನು ತೆಗೆಯಲಾಗುತ್ತಿದೆ ಎಂದು ರಷ್ಯಾದ ತನಿಖಾ ಸಮಿತಿಯನ್ನು ಉಲ್ಲೇಖಿಸಿ, ಅಲ್ಲಿನ ಮಾಧ್ಯಮ ಖಿಂSS ವರದಿ ಮಾಡಿದೆ. ರಷ್ಯಾದ ಆರೋಗ್ಯ ಸಚಿವಾಲಯದ ಪ್ರಕಾರ, ೧೪೭ ಮಂದಿ ಗಾಯಗೊಂಡಿದ್ದಾರೆ. ರಷ್ಯಾ ಮೇಲಿನ ಭಯೋತ್ಪಾದಕ ದಾಳಿಯನ್ನು ಅಂತಾರಾಷ್ಟ್ರೀಯ ಸಮುದಾಯಗಳು ಖಂಡಿಸಿವೆ. ವಿಶ್ವಸಂಸ್ಥೆಯ ಮಹಾ ಪ್ರಧಾನ ಕಾರ್ಯದರ್ಶಿ ಆಂಟೊನಿಯೋ ಗುಟೆರಸ್, ಮಾಸ್ಕೊದ ಕ್ರೋಕಸ್ ಸಿಟಿ ಹಾಲ್ ಮೇಲೆ ಭಯೋತ್ಪಾದಕರು ನಿನ್ನೆ ನಡೆಸಿದ ದಾಳಿಯನ್ನು ಬಲವಾಗಿ ಖಂಡಿಸಿದ್ದಾರೆ ಹಾಗೂ ದಿಗ್ಭ್ರಮೆ ವ್ಯಕ್ತಪಡಿಸಿದ್ದಾರೆ. ಈ ಸಂದರ್ಭದಲ್ಲಿ ರಷ್ಯಾ ಸರ್ಕಾರಕ್ಕೆ ಎಲ್ಲ ಸರ್ಕಾರಗಳು ಸರ್ವ ರೀತಿಯ ಸಹಕಾರ ನೀಡಬೇಕು ಎಂದು ವಿಶ್ವಸಂಸ್ಥೆಯ ಭದ್ರತಾಮಂಡಳಿ ಕರೆ ನೀಡಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಮಾಸ್ಕೊ ಮೇಲಿನ ಉಗ್ರರ ದಾಳಿಯನ್ನು ಖಂಡಿಸಿದ್ದಾರೆ. ಅಮೆರಿಕ, ಬ್ರಿಟನ್, ಫ್ರಾನ್ಸ್, ಐರೋಪ್ಯ ಸಮುದಾಯ, ಸ್ಪೇನ್ ಮತ್ತು ಯುಎಇ ಗಳು ಕೂಡ ದಿಗ್ಭ್ರಮೆ ವ್ಯಕ್ತಪಡಿಸಿವೆ. ಫ್ರಾನ್ಸ್ ಅಧ್ಯಕ್ಷ ಎಮ್ಮನ್ಯೂಯೆಲ್ ಮ್ಯಾಕ್ರೋನ್, ಸಂತ್ರಸ್ಥ ಕುಟುಂಬಗಳಿಗೆ ಸಂತಾಪ ವ್ಯಕ್ತಪಡಿಸಿದ್ದಾರೆ. ಸ್ಪೇನ್ ಈ ಘಟನೆ ಬಗ್ಗೆ ಆಘಾತ ವ್ಯಕ್ತಪಡಿಸಿದೆ. ಇಟಲಿ ಪ್ರಧಾನಮಂತ್ರಿ ಜಾರ್ಜಿಯಾ ಮೆಲೊನಿ, ಇದು ಭಯೋತ್ಪಾದಕರ ಅಕ್ಷಮ್ಯ ಕೃತ್ಯವಾಗಿದೆ ಎಂದಿದ್ದಾರೆ. ಇಸ್ಲಾಮಿಕ್ ಸ್ಟೇಟ್ ಖೋರಸಾನ್ -

ಐಎಸ್ಎಸ್-ಕೆ ಮಾಸ್ಕೊ ದಾಳಿಗೆ ತಾನು ಜವಾಬ್ದಾರ ಎಂದು ಹೇಳಿಕೊಂಡಿದೆ. ಘಟನೆಗೆ ಸಂಬಂಧಿಸಿದಂತೆ ನಾಲ್ವರು ಶಂಕಿತ ಬಂದೂಕುದಾರಿಗಳೂ ಸೇರಿದಂತೆ ಹನ್ನೊಂದು ಜನರನ್ನು ಬಂಧಿಸಲಾಗಿದೆ ಎಂದು ರಷ್ಯಾ ತಿಳಿಸಿದೆ.

<><*<><>*><>

ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಪಂದ್ಯದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ತಂಡ ಸನ್ ರೈಸರ್ಸ್ ಹೈದರಾಬಾದ್ ತಂಡವನ್ನು ೪ ರನ್ ಗಳಿಂದ ಪರಾಭವಗೊಳಿಸಿದೆ. ೨೦೯ ರನ್ ಗಳ ಗುರಿ ಬೆನ್ನತ್ತಿದ್ದ ಸನ್ ರೈಸರ್ಸ್ ಹೈದರಾಬಾದ್ ೨೦ ಓವರ್ ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೨೦೪ ರನ್ ಗಳಿಸಿತು. ಮೊದಲು ಬ್ಯಾಟ್ ಮಾಡಿದ ಕೊಲ್ಕತ್ತಾ ನೈಟ್ ರೈಡರ್ಸ್ ನಿಗದಿತ ೨೦ ಓವರ್ ಗಳಲ್ಲಿ ೨೦೮ ರನ್ ಗಳಿಸಿತು. ಕೊಲ್ಕತ್ತಾ ತಂಡದಲ್ಲಿ ಆಂಡ್ರೆ ರಸ್ಸೆಲ್ ೨೫ ಎಸೆತಗಳಲ್ಲಿ ಅಜೇಯ ೬೪ ರನ್ ಗಳಿಸಿದರೆ, ಹೈದರಾಬಾದ್ ತಂಡದಲ್ಲಿ ಹೆನ್ರಿಚ್ ಕ್ಲಾಸೇನ್ ೨೯ ಎಸೆತಗಳಲ್ಲಿ ೬೩ ರನ್ ಪಡೆದರು. ಕೊಲ್ಕತ್ತಾ ತಂಡದ ಹರ್ಷಿತ್ ರಾಣಾ ೩ ವಿಕೆಟ್ ಪಡೆದರೆ, ಹೈದರಾಬಾದ್ ತಂಡದಲ್ಲಿ ಟಿ ನಟರಾಜನ್ ೩ ವಿಕೆಟ್ ಪಡೆದರು. ಆಂಡ್ರೆ ರಸ್ಸೆಲ್ ಅವರನ್ನು ಪಂದ್ಯ ಶ್ರೇಷ್ಠ ಎಂದು ಘೋಷಿಸಲಾಯಿತು. ಇದಕ್ಕೂ ಮುನ್ನ ಚಂಡೀಗಢದಲ್ಲಿ ನಡೆದ ದಿನದ ಮೊದಲ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡ  ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ನಾಲ್ಕು ವಿಕೆಟ್ ಗಳಿಂದ ಮಣಿಸಿದೆ. ೧೭೫ ರನ್ ಗಳ ಗುರಿ ಬೆನ್ನತ್ತಿದ್ದ ಪಂಜಾಬ್ ಕಿಂಗ್ಸ್ ತಂಡ ೧೯.೨ ಓವರ್ ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೭೭ ರನ್ ಗಳಿಸಿತು. ಇಂದು ಜೈಪುರದಲ್ಲಿ ಮಧ್ಯಾಹ್ನ ೩. ೩೦ ಕ್ಕೆ ಆರಂಭವಾಗುವ ಪಂದ್ಯದಲ್ಲಿ ರಾಜಸ್ತಾನ್ ರಾಯಲ್ಸ್ ಮತ್ತು ಲಕ್ನೋ ಸೂಪರ್ ಜೈಂಟ್ಸ್ ಮುಖಾಮುಖಿಯಾಗಲಿವೆ. ಸಂಜೆ ೭.೩೦ ಕ್ಕೆ ಅಹಮದಾಬಾದ್ ನಲ್ಲಿ ನಡೆಯುವ ಪಂದ್ಯದಲ್ಲಿ ಗುಜರಾತ್ ಟೈಟನ್ಸ್ ಮತ್ತು ಮುಂಬೈ ಇಂಡಿನ್ಸ್ ತಂಡಗಳು ಸೆಣಸಲಿವೆ.

<><*<><>*><>

ಸ್ವಿಟ್ಜರ್ ಲ್ಯಾಂಡ್ ನ ಬಾಸೆಲ್ ನಲ್ಲಿ ನಿನ್ನೆ ಸ್ವಿಸ್ ಒಪನ್ ಬ್ಯಾಡ್ಮಿಂಟನ್ ಪಂದ್ಯದಲ್ಲಿ ಭಾರತದ ಸ್ಟಾರ್ ಷಟ್ಲರ್ ಕಿಡಂಬಿ ಶ್ರೀಕಾಂತ್ ಸ್ವಿಸ್ ಓಪನ್ ಟೂರ್ನಮೆಂಟ್‌ನಿಂದ ಹೊರಬಿದ್ದಿದ್ದಾರೆ. ಒಂದು ಗಂಟೆ ೫ ನಿಮಿಷಗಳ ಕಾಲ ನಡೆದ ಪುರುಷರ ಸಿಂಗಲ್ಸ್ ಸೆಮಿಫೈನಲ್‌ನಲ್ಲಿ ಶ್ರೀಕಾಂತ್ ೨೧-೧೫, ೦೯-೨೧, ೧೮-೨೧ ಸೆಟ್ ಗಳಿಂದ ಲಿನ್ ಚುನ್-ಯಿ ವಿರುದ್ಧ ಸೋತರು. ಕಿಡಂಬಿ ಶ್ರೀಕಾಂತ್ ನಿರ್ಗಮನದ ನಂತರ ಸ್ವಿಸ್ ಓಪನ್‌ನಲ್ಲಿ ಭಾರತದ ಸವಾಲು ಕೊನೆಗೊಂಡಿದೆ.